# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಶೆಟ್ಟಿಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ

## ಮಲ್ಲಸಂದ್ರ ವಾರ್ಡ್–13 ರ ವಾರ್ಡ್ ಸಭೆಯ (Ward Decentralized Traige and Emergency Response (DETER) Committee for COVID-19) ನಡವಳಿ

ದಿನಾಂಕ: 06.08.2022 ರಂದು ಬೆಳಗ್ಗೆ 11.00 ಗಂಟೆಗೆ ಶ್ರೀ.ಎಸ್.ಎಲ್. ವಿಶ್ವನಾಥ್, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ಮಲ್ಲಸಂದ್ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಹಾಜರಿದ್ದವರು:

1. ಶ್ರೀ. ಎಸ್.ಎಲ್. ವಿಶ್ವನಾಥ್, ವಾರ್ಡ್ ಕಮಿಟಿ ನೋಡೆಲ್ ಆಫೀಸರ್, ವಾರ್ಡ್ ನಂ.13 ಮಲ್ಲಸಂದ್ರ.
2. ಶ್ರೀ ಸಿ.ಎನ್. ಜಗದೀಶ್, ಸಹಾಯಕ ಅಭಿಯಂತರರು, ವಾರ್ಡ್ ನಂ.13 ಮಲ್ಲಸಂದ್ರ.
3. ಶ್ರೀ ಪಾರ್ಥ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಲ್ಲಸಂದ್ರ
4. ಶ್ರೀ ಮಂಜುನಾಥ್, ವರ್ಕ್ ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5. ಶ್ರೀ ಚಿಕ್ಕಣ್ಣಸ್ವಾಮಿ, ಅರಣ್ಯ ಇಲಾಖೆ
6. ಶ್ರೀ ಮಹಾದೇವಯ್ಯ ತೋಟಗಾರಿಕಾ ಇಲಾಖೆ
7. ಶ್ರೀ ದೇವರಾಜ್, ಪಶುಇಲಾಖೆ
8. ಶ್ರೀ ಮಂಜು ಗಗನ್, ಎಸ್.ಡಬ್ಲ್ಯೂ.ಎಂ
9. ಶ್ರೀ ಶ್ರೀ ಲಕ್ಷ್ಮೀಪತಿ, ರವರು ವಾರ್ಡ್ ಸಮಿತಿ ಸದಸ್ಯರು.

ಶ್ರೀ ಸಿ.ಎನ್. ಜಗದೀಶ್, ವಾರ್ಡ್ ಕಾರ್ಯದರ್ಶಿರವರು ವಾರ್ಡ್ ಸಭೆಯಲ್ಲಿ ನೋಡೆಲ್ ಅಧಿಕಾರಿಯಾದ ವಿಶ್ವನಾಥ್ ರವರಿಗೆ ಹಾಗೂ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರುಗಳಿಗೆ ಅಧಿಕಾರಿಗಳಿಗೆ ಮತ್ತು ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು. ಕಾರ್ಯದರ್ಶಿಗಳು ಮಾತನಾಡಿ ಈ ಹಿಂದಿನ ಸಭೆಯಲ್ಲಿ ನಡೆದ ನಡುವಳಿಗಳ ಬಗ್ಗೆ ಮತ್ತು ನಡುವಳಿಗಳಿಗೆ ಪೂರಕವಾಗಿ ತೆಗೆದುಕೊಂಡ ಕ್ರಮದ ಬಗ್ಗೆ ವಿವರಿಸಿದರು.

### ದಿನಾಂಕ: 06.08.2022ರಂದು ನಡೆದ ಸಭಾ ನಡವಳಿಗಳು

1. ರಸ್ತೆ ಮೂಲಭೂತ ಸೌಕರ್ಯ, ವಿಭಾಗಕ್ಕೆ ಸೇರಿರುವ ಶೆಟ್ಟಿಹಳ್ಳಿ ಮುಖ್ಯರಸ್ತೆ (ಜುಂಜಪ್ಪಸ್ವಾಮಿ ದೇವಸ್ಥಾನದ ಹಿಂಬದಿಯಲ್ಲಿ) ರಸ್ತೆಯಲ್ಲಿನ ಅವ್ಯವಸ್ಥೆಯನ್ನು ಅಂದರೆ ಮಳೆಗಾಲದಲ್ಲಿ ನೀರು ತುಂಬಿದ್ದು, ಗುಂಡಿಗಳಿಂದ ತುಂಬಿದ್ದು, ವಾಹನ ಸವಾರರಿಗೆ ಕಷ್ಟಕರವಾಗಿರುತ್ತದೆ. ಆದ ಕಾರಣ ಸದರಿ ರಸ್ತೆಯನ್ನು ಕೂಡಲೇ ರಿಪೇರಿ ಮಾಡಲು ಹಾಗೂ ಹೊಸದಾಗಿ ರಸ್ತೆಯನ್ನು ನಿರ್ಮಿಸಲು ಕ್ರಮಕೈಗೊಳ್ಳುವಂತೆ ರಸ್ತೆ ಮೂಲಭೂತ ಸೌಕರ್ಯ, ವಿಭಾಗಕ್ಕೆ ಪತ್ರ ಬರೆಯಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಲಾಯಿತು.

2. ವಾರ್ಡ್‌ನಲ್ಲಿನ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ನೀರು ಮತ್ತು ಒಳಚರಂಡಿ ಸಂಪರ್ಕಕ್ಕಾಗಿ ಅಗೆಯಲಾಗಿರುವ ರಸ್ತೆಗಳನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದಲೇ ಸರಿಪಡಿಸಿ ನೀಡಲು ಸಭೆಯಲ್ಲಿ ಹಾಜರಿದ್ದ ವರ್ಕ್ ಇನ್ಸ್‌ಪೆಕ್ಟರ್‌ರವರಿಗೆ ಸೂಚಿಸಲಾಯಿತು.

3. ವಾರ್ಡ್‌ನಲ್ಲಿನ ವಿದ್ಯುತ್ ದೀಪಗಳನ್ನು ದೂರು ನೀಡಿದ ಕೂಡಲೇ ಶೀಘ್ರವಾಗಿ ನಿರ್ವಹಿ... ಸಂಬಂಧಪಟ್ಟವರಿಗೆ ಕೂಡಲೇ ವಿಷಯ ತಿಳಿಸಲು ಸಭೆಯಲ್ಲಿ ಸೂಚಿಸಲಾಯಿತು.

4. ವೈಲ್‌ಲೈನ್ ರಸ್ತೆಯಲ್ಲಿರುವ ಉದ್ಯಾನವನಗಳ ಎರಡು ಬದಿಗೆ ಸೊಳ್ಳೆ ನಾಶಕವನ್ನು ಸಿಂಪಡಿಸಲು ಸಭೆಯಲ್ಲಿ ಹಾಜರಿದ್ದ ಆರೋಗ್ಯ ಇಲಾಖೆಯ ಸಿಬ್ಬಂದಿಗೆ ಸೂಚಿಸಲಾಯಿತು.

5. ವಾರ್ಡ್‌ನಲ್ಲಿನ ವಿವಿಧ ಪ್ರದೇಶಗಳಲ್ಲಿ ದಿನಂಪ್ರತಿ ಕಸ ನಿರ್ವಹಿಸುವ ಕೆಲಸಗಾರರಿಗೆ ಸೂಕ್ತ ನಿರ್ದೇಶನ ನೀಡಿ ಪ್ರತಿ ದಿನ ಸರಿಯಾದ ರೀತಿಯಲ್ಲಿ ಕಸವನ್ನು ಸ್ವಚ್ಛಗೊಳಿಸಲು ಹಾಗೂ ನಿರ್ವಹಿಸಲು ಸೂಚಿಸುವಂತೆ ಸಭೆಯಲ್ಲಿ ಹಾಜರಿದ್ದ ಬಿಬಿಎಂಪಿ ಆರೋಗ್ಯ ನಿರೀಕ್ಷಕರಿಗೆ ಸೂಚಿಸಲಾಯಿತು.

6. ವಾರ್ಡ್‌ನಲ್ಲಿ ಯಾವುದೇ ಡೆಂಗ್ಯೂ ರೋಗವು ಕಂಡುಬಂದಿರುವುದಿಲ್ಲ. ಇಲ್ಲಿಯವರೆಗಿನ ಕೋವಿಡ್‌ನಿಂದ ಬಳಲಿರುವವರ ಒಟ್ಟು ಸಂಖ್ಯೆ 3993 ಆಗಿದ್ದು, ಅದರಲ್ಲಿ 3940 ರೋಗಿಗಳು ಬಿಡುಗಡೆ ಹೊಂದಿರುತ್ತಾರೆ. ಹಾಲಿ 14 ರೋಗಿಗಳು ಮಾತ್ರ ಕಂಡುಬಂದಿರುತ್ತಾರೆ ಎಂಬುದಾಗಿ ಸಭೆಯಲ್ಲಿ ಹಾಜರಿದ್ದ ಆರೋಗ್ಯ ಇಲಾಖೆಯಿಂದ ತಿಳಿದು ಬಂದಿರುತ್ತದೆ.

7. ವಾರ್ಡ್‌ನಲ್ಲಿ ಕೋವಿಡ್19 ರ ಸಂಬಂಧ ಇಲ್ಲಿಯವರೆವಿಗೂ 1ನೇ ಮತ್ತು 2ನೇ ಹಂತ್ ವ್ಯಾಕ್ಸಿನ್ ಪಡೆದವರ ವಿವರಗಳು

| ಕ್ರಮ ಸಂಖ್ಯೆ | ವಯಸ್ಸು | 1ನೇ ಡೋಸೇಜ್ | 2ನೇ ಡೋಸೇಜ್ | ಬೂಸ್ಟರ್ | ಷರಾ |
|---|---|---|---|---|---|
| 1 | 18 ರ ಮೇಲ್ಪಟ್ಟು | 55700 | 63174 | 3200 | – |
| 2 | 15 ರಿಂದ 18 ರವರೆಗೆ | 1200 | 1320 | – | – |
| 3 | 12 ರಿಂದ 14 ರವರೆಗೆ | 1220 | 1100 | – | – |

ಈ ಮೇಲಿನ ಎಲ್ಲಾ ಅಂಶಗಳನ್ನು ತ್ವರಿತಗತಿಯಲ್ಲಿ ಬಗೆಹರಿಸಲು ವಾರ್ಡ್ ಸಮಿತಿ ಅಧ್ಯಕ್ಷರಾದ ಶ್ರೀ ವಿಶ್ವನಾಥ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ವಿಭಾಗದ ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚಿಸಿದರು ಮತ್ತು ಮುಂದಿನ ಸಭೆಯಲ್ಲಿ ಈ ಬಗ್ಗೆ ಅನುಸರಣಾ ವರದಿಯನ್ನು ಸಲ್ಲಿಸುವಂತೆ ತಿಳಿಸಿದರು ಮತ್ತು ಸಭೆಯಲ್ಲಿ ಹಾಜರಿದ್ದ ಆರೋಗ್ಯಾಧಿಕಾರಿಯೊಂದಿಗೆ ಚರ್ಚಿಸಿ ಕೋವಿಡ್ ವ್ಯಾಕ್ಸಿನೇಷನ್, ಬೂಸ್ಟರ್ ಡೋಸ್ ಮತ್ತು ಡೆಂಗ್ಯೂ ಪ್ರಕರಣಗಳ ಬಗ್ಗೆ ಮಾಹಿತಿ ಪಡೆದರು. ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸದಸ್ಯರಿಗೆ, ಅಧಿಕಾರಿಗಳಿಗೆ, ಸಾರ್ವಜನಿಕರಿಗೆ ಧನ್ಯವಾದಗಳನ್ನು ತಿಳಿಸುತ್ತಾ ವಾರ್ಡ್ ಸಭೆಯನ್ನು ಮುಕ್ತಾಯಗೊಳಿಸಿದರು.

(ಸಹಿ)
ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 13, ಮಲ್ಲಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Vishwanath (ಸಹಿ) 6/8/2022
ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ13, ಮಲ್ಲಸಂದ್ರ
ಮತ್ತು ತಹಶೀಲ್ದಾರ್, ಉಪ ಆಯುಕ್ತರು(ಭೂಸ್ವಾಧೀನ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ:-

1) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.

3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಶೆ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಂದಾಯ ಅಧಿಕಾರಿ (ಶೆ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
11) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 13 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12) ಕಛೇರಿ ಪ್ರತಿ.